ದಿನಾಂಕಃ 21-04-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ** ವಾದಿ ಪರ ವಕೀಲರಿಂದ,

1) ವಾದಿಯು ಈ ದಾವೆಯನ್ನು ವಿಭಾಗ ಕೋರಿ ಸಲ್ಲಿಸಿರುತ್ತಾರೆ. ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ತಿಳಿಸಿರುವ ವಿಷಯಗಳನ್ನು ತಿಳಿದುಕೊಂಡಿರುತ್ತೇನೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ನಾನೇ ತಯಾರು ಮಾಡಿರುತ್ತೇನೆ. ನಾನು ಬಿ ಎಸ್ ಇ ವ್ಯಾಸಂಗ ಮಾಡಿರುತ್ತೇನೆ.

2) ನನ್ನ ತಂದೆ ಜೀವಂತ ಅವಧಿಯಲ್ಲಿ ವಾದಿಯು ಪೋಲಿಸ್ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದರು ಎಂದರೆ ಸರಿ. ನನ್ನ ತಂದೆ ದಿನಾಂಕ 30.01.1978 ರಂದು ಮರಣ ಹೊಂದಿರುತ್ತಾರೆ. ನನ್ನ ತಂದೆ ಜೀವಂತ ಅವಧಿಯಲ್ಲಿ ಕುಟುಂಬದ ವ್ಯವಹಾವನ್ನು ನನ ತಂದೆ ನೋಡಿಕೊಳ್ಳುತ್ತಿದ್ದರು ಎಂದರೆ ಸರಿಯಲ್ಲ. ನನ್ನ ತಂದೆ ಅಭಿಯಂತರರು ಆಗಿದ್ದರು.

3) ನನ್ನ ತಂದೆ ಜೀವಂತ ಅವಧಿಯಲ್ಲಿ ಪ್ರತಿವಾದಿ 1, 3 ಮತ್ತು ನನಗೆ ಮದುವೆ ಆಗಿತ್ತು ಎಂದರೆ ಸರಿ. ನನ್ನ ತಂದೆ ಪ್ರತಿವಾದಿ 1 ಮತ್ತು 3 ರವರ ಮದುವೆ ಖರ್ಚನ್ನು ಭರಿಸಿರುತ್ತಾರೆ ಎಂದರೆ ಸರಿ. ನನ್ನ ಮದುವೆ ಖರ್ಚನ್ನು ಸಹ ನನ್ನ ತಂದೆ ಭರಿಸಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಮದುವೆ ಖರ್ಚನ್ನು ನನ್ನ ತಂದೆ ಭರಿಸಿದ್ದರೂ ಸಹ ಇಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

4) ನನ್ನ ತಂದೆ ಜೀವಂತ ಅವಧಿಯಲ್ಲಿ ಪ್ರತಿವಾದಿ 7 ಮತ್ತು 9 ರವರಿಗೆ ಮದುವೆ ಆಗಿರಲಿಲ್ಲ ಎಂದರೆ ಸರಿ. ನನ್ನ ತಂದೆ ತೀರಿಕೊಂಡ ನಂತರ ಕುಟುಂಬದ ವ್ಯವಹಾರವನ್ನು ನನ್ನ ತಾಯಿ ಮತ್ತು ಪ್ರತಿವಾದಿ 4 ರವರು ನಿರ್ವಹಿಸುತ್ತಿದ್ದರು. ಮದುವೆ ಆದ ನಂತರ

ನಾನು ಬೇರೆಯಾಗಿ ವಾಸ ಮಾಡುತ್ತಿದ್ದೇ ಎಂದರೆ ಸಾಕ್ಷಿ ಮದುವೆಗೂ ಮುಂಚೆಯೇ ನಾನು ಬೆಂಗಳೂರಿನಲ್ಲಿ ವಾಸವಾಗಿದ್ದೆ. ನಾನು ನನ್ನ ತಾಯಿ ಜೊತೆ ವಾಸವಾಗಿರುವುದಿಲ್ಲ ಎಂದರೆ ಸರಿಯಲ್ಲ.

5) ನನ್ನ ತಂದೆ ತೀರಿಕೊಂಡ ನಂತರ ನನ್ನ ತಾಯಿ ಮತ್ತು ಪ್ರತಿವಾದಿ 5 ರಿಂದ 9 ರವರು ಮಿರ್ಲೆ ಗ್ರಾಮದಲ್ಲಿ ಪ್ರತ್ಯೇಕವಾಗಿ ವಾಸವಾಗಿದ್ದರೂ ಎಂದರೆ ಸರಿಯಲ್ಲ. ನನ್ನ ತಾಯಿ ರವರು ಪ್ರತಿವಾದಿ 7 ಮತ್ತು 9 ರವರ ಮದುವೆ ಮಾಡಿದ್ದರು ಎಂದರೆ ನನಗೆ ಗೊತ್ತಿಲ್ಲ. ನನ್ನ ತಾಯಿ ರವರು ಪ್ರತಿವಾದಿ 7 ಮತ್ತು 9 ರವರ ಮದುವೆ ಮಾಡಿದ್ದರೂ ಸಹ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆ ತೀರಿಕೊಂಡ ನಂತರ ನಾನು ನನ್ನ ತಾಯಿಯ ಯೋಗಕ್ಷೇಮವನ್ನು ನೋಡಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

6) ವಾದಿ ಹಾಗೂ ಪ್ರತಿವಾದಿ ನಡುವ ದಾವಾ ಸ್ವತ್ತಿಗೆ ಸಂಬಂಧಿಸಿದ ಯಾವುದೇ ವಿಭಾಗ ಆಗಿರುವುದಿಲ್ಲ ಎಂದರೆ ಸರಿ. ದಾವಾಸ್ವತ್ತುಗಳು ಪಿತ್ರಾರ್ಜಿತ ಆಸ್ತಿಗಳು ಎಂದರೆ ಸರಿ. ನನ್ನ ತಂದೆ ತೀರಿಕೊಂಡ ನಂತರ ದಾವಾ ಸ್ವತ್ತುಗಳ ಖಾತೆ ನನ್ನ ತಾಯಿಯ ಹೆಸರಿಗೆ ಪೌತಿ ವಾರಸು ಮೂಲಕ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ದಾವಾಸ್ವತ್ತುಗಳು ನನ್ನ ಮತ್ತು ಪ್ರತಿವಾದಿ ಹಾಗೂ ವಾದಿಯ ಜಂಟಿ ಸ್ವಾಧೀನ ಇರುತ್ತವೆ ಎಂದರೆ ಸರಿ.

7) ದಾವಾ ಐಟಂ ನಂ. 3 ಆಸ್ತಿಯ ಖಾತೆ ನನ್ನ ತಂದೆಯ ಹೆಸರಿನಲ್ಲಿ ಇರುತ್ತದೆ ಎಂದರೆ ನನಗೆ ಗೊತ್ತಿಲ್ಲ. ದಾವಾ ಐಟಂ ನಂ. 3 ಆಸ್ತಿಯು ಪಿತ್ರಾರ್ಜಿತ ಆಸ್ತಿ ಆಗಿರುತ್ತದೆ. ನನ್ನ ತಾಯಿ ಪ್ರತಿವಾದಿ 7 ಮತ್ತು 9 ರವರ ಮದುವೆ ಖರ್ಚಿಗಾಗಿ ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಆಸ್ತಿ ಮಾರಾಟ ಮಾಡುವ ಕಾಲಕ್ಕೆ ಸದರಿ ಆಸ್ತಿಯ ಖಾತೆ ಯರ ಹೆಸರಿನಲ್ಲಿ ಇತ್ತು ಎಂದರೆ ನನಗೆ ಗೊತ್ತಿಲ್ಲ. ನಮ್ಮ ಕುಟುಂಬದ ವಿಷಯ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇತ್ತು ಎಂದರೆ ಸರಿಯಲ್ಲ. ಸದರಿ ಕ್ರಯ

ಪತ್ರಕ್ಕೆ ವಾದಿ ಸಹ ಸಾಕ್ಷಿ ಆಗಿ ಸಹಿ ಮಾಡಿರುತ್ತಾರೆ ಎಂದರೆ ನನಗೆ ಮೋಸ ಮಾಡಬೇಕೆಂಬ ಉದ್ದೇಶದಿಂದ ಮಾಡಿರುತ್ತಾರೆ ಎಂದು ನುಡಿಯುತ್ತಾರೆ. ಸದರಿ ಮಾರಾಟ ಮಾಡಿರುವ ವಿಷಯ ನನಗೆ ದಿನಾಂಕ 18.02.2018 ರಂದು ನನಗೆ ತಿಳಿದಿರುತ್ತದೆ. ನನಗೆ ಮಾಹಿತಿ ಬಂದ ನಂತರ ಕ್ರಯ ಪತ್ರವನ್ನು ರದ್ದು ಪಡಿಸಲು ನಾನು ದಾವೆ ಸಲ್ಲಿಸಿರುವುದಿಲ್ಲ. ನನಗೆ ನನ್ನ ತಾಯಿ ಮಾರಾಟ ಮಾಡಿರುವ ವಿಷಯದ ಬಗ್ಗೆ ನನಗೆ ಗೊತ್ತಿದ್ದರೂ ಸಹ ನಾನು ಕ್ರಯ ಪತ್ರಕ್ಕೆ ಸಹಿ ಮಾಡಲು ನಿರಾಕರಿಸಿರುತ್ತೇನೆ ಎಂದರೆ ಸರಿಯಲ್ಲ.

8) ದಿನಾಂಕ 31.12.2017 ರಂದು ಕರಾರು ಪತ್ರ ಆಗುವ ಕಾಲಕ್ಕೆ ವಾದಿಯನ್ನು ಹೊರತುಪಡಿಸಿ ಇತರೇ ಎಲ್ಲ ಕುಟುಂಬ ಸದಸ್ಯರು ಇದ್ದರು. ನಾನು ಸದರಿ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ವಾದಿಯು ನನ್ನ ಬಳಿ ಬಂದು ದಾವಾಸ್ವತ್ತುಗಳಲ್ಲಿ ಭಾಗ ಬೇಕು ಎಂದು ಕೇಳಿರುತ್ತಾರೆ ಎಂದರೆ ಸರಿಯಲ್ಲ. ದಿನಾಂಕ 25.06.2020 ರಂದು ನನಗೆ ವಾದಿಯು ಭಾಗ ಕೋರಿ ತಿಳುವಳಿಕೆ ಪತ್ರ ಕಳುಹಿಸಿರುತ್ತಾರೆ ಎಂದರೆ ಸರಿ. ನಾನು ತಿಳುವಳಿಕೆ ಪತ್ರಕ್ಕೆ ಪ್ರತ್ಯುತ್ತರ ನೀಡಿರುವುದಿಲ್ಲ. ನಾನು ವಾದಿಗೆ ಭಾಗ ನೀಡುವುದನ್ನು ತಪ್ಪಿಸುವ ಸಲುವಾಗಿ ಸುಳ್ಳು ತಕರಾರು ಸಲ್ಲಿಸಿ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ